# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಪ್ರಸಾದ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು – ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/113/ಗ್ರಾಪಂಕಾ/2015, ದಿನಾಂಕ:20–03–2015.
2. ಅಪರ ನಿಬಂಧಕರು ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ–1 ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1/DE/163/2015/ARE-9 ದಿನಾಂಕ: 14-03-2017.
3. ಮಾನ್ಯ ಉಪಲೋಕಾಯುಕ್ತ–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/163/2015/ARE-9, ದಿನಾಂಕ: 16-03-2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/259/ಗ್ರಾಪಂಕಾ/2017, ದಿನಾಂಕ: 10–04–2017.
5. ಶ್ರೀ ಪ್ರಸಾದ್ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿ:05–05–2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಪ್ರಸಾದ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11(9)ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

"ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ. ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರು 2011–12 ಸಾಲಿನಲ್ಲಿ ಇಂದಿರಾ ಆವಾಸ್ ಯೋಜನೆಯ ಫಲಾನುಭವಿಯಾದ ಶ್ರೀಮತಿ ಉಮ್ಮವ್ವ ಕೋಂ ರಾಮಪ್ಪನವರ (ದೂರುದಾರರು) 3ನೇ ಕಂತಿನ ಹಣ ರೂ.20,000/–ಗಳ ಚೆಕ್ಕನ್ನು ದೂರುದಾರರ ಸಂಬಂಧಿ ಹಾಲಿ ಗ್ರಾಮ ಪಂಚಾಯತಿ ಸದಸ್ಯ ಹಾಗೂ ಹಿಂದಿನ ಅಧ್ಯಕ್ಷರಾದ ಶ್ರೀ ಶಿವಪ್ಪ ನವರಿಗೆ ನೀಡಿ ಸರ್ಕಾರಿ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿನಡೆದುಕೊಂಡು ಸದರಿಯವರು ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮ 1966 ರ ನಿಯಮ 3(1) (i) ರಿಂದ (iii) ಅನ್ವಯ ದುರ್ನಡತೆ ಎಸಗಿರುತ್ತಾರೆ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ "ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತ-1 ರವರು ಅಂಗೀಕರಿಸಿ ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (4) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟೀಸಿಗೆ ಅವರು ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

"ಇಂದಿರಾ ಆವಾಜ್ ಯೋಜನೆಯ ಫಲಾನುಭವಿಯಾದ ಶ್ರೀಮತಿ ಉಮ್ಮವ್ವ ಕೋಂ ರಾಮಪ್ಪನವರ ಮನೆಯ 3ನೇ ಕಂತಿನ ಚೆಕ್ಕನ್ನು ಫಲಾನುಭವಿಯು ಅನಾರೋಗ್ಯದಿಂದಿದ್ದ ಕಾರಣಕ್ಕಾಗಿ ಉಮ್ಮವ್ವನವರ ಹೆಸರಿನ ಅಕೌಂಟ್ ಪೇಯಿ ಚೆಕ್ ಫಲಾನುಭವಿಯ ಬದಲಾಗಿ ಅವರ ಸಂಬಂಧಿಕರಾದ (ಹಾಗೂ ಅಂದಿನ ಅಧ್ಯಕ್ಷರಾದ) ಶ್ರೀ ಶಿವಣ್ಣನವರಿಗೆ ನೀಡಿರುವುದಾಗಿ ಒಪ್ಪಿಕೊಂಡಿರುತ್ತಾರೆ. ಈ ಚೆಕ್ಕನ್ನು ಪಡೆಯಲು ಶ್ರೀ ಶಿವಣ್ಣನವರು "ಫಲಾನುಭವಿಗೆ ಆರೋಗ್ಯ ಸರಿ ಇಲ್ಲದ ಕಾರಣ ಫಲಾನುಭವಿಯು ನೀಡಿದ ಒಪ್ಪಿಗೆ ಪತ್ರವನ್ನು ಪಂಚಾಯತಿಗೆ ಹಾಜರು ಪಡಿಸಿ ತಾನೇ ಚೆಕ್ ಪಡೆಯುವುದಾಗಿ" ದೃಢೀಕರಣ ಪತ್ರವನ್ನು ನೀಡಿದ ಕಾರಣ ಶ್ರೀ ಶಿವಣ್ಣನವರಿಗೆ ಚೆಕ್ಕನ್ನು ನೀಡಿರುವುದಾಗಿ ಆಪಾದಿತರಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರು ಮನವಿಯಲ್ಲಿ ತಿಳಿಸಿರುತ್ತಾರೆ. ಆದ ಕಾರಣ "ತಮ್ಮದೇನು ತಪ್ಪಿಲ್ಲವೆಂದು" ವಿವರಿಸುತ್ತಾ, "ತಮ್ಮ ವಿರುದ್ಧದ ಶಿಸ್ತು ಕ್ರಮವನ್ನು ಕೈಬಿಡಲು" ಕೋರಿರುತ್ತಾರೆ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ.

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತ-1 ರವರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ "ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರಿಗೆ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸನ್ನು ಪರಿಶೀಲಿಸಿ "ಶ್ರೀ ಪ್ರಸಾದ್ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರಿಗೆ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/259/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:08-11-2017.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು "ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ ಇವರಿಗೆ **"ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ದೇವದುರ್ಗ, ರಾಯಚೂರು ಜಿಲ್ಲೆ.
7. ಶ್ರೀ ಪ್ರಸಾದ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕ್ಯಾದಿಗೇರಾ ಗ್ರಾಮ ಪಂಚಾಯತಿ, ದೇವದುರ್ಗ ತಾಲ್ಲೂಕು, ರಾಯಚೂರು ಜಿಲ್ಲೆ.
8. ಗಣಕ ಕೋಶ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.